ಶಿವಮೊಗ್ಗ ನಗರಸಭಾ ವ್ಯಾಪ್ತಿಯ ರಸ್ತೆಗಳ ಅಭಿವೃದ್ಧಿ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 93(308)

ಸದಸ್ಯರ ಹೆಸರು: ಶ್ರೀ ಹೆಚ್.ಎಂ.ಚಂದ್ರಶೇಖರಪ್ಪ(ಶಿವಮೊಗ್ಗ)

ಉತ್ತರಿಸುವ ಸಚಿವರು: ಶ್ರೀ ಎಂ.ಮಲ್ಲಿಕಾರ್ಜುನ ನಾಗಪ್ಪ(ಪೌರಾಡಳಿತ ರಾಜ್ಯ ಸಚಿವರು)

ಪ್ರಶ್ನೆ

ಅ) ಶಿವಮೊಗ್ಗ ನಗರಸಭಾ ವ್ಯಾಪ್ತಿಯ ರಸ್ತೆಗಳು ಮತ್ತು ಚರಂಡಿಗಳು ಪೂರ್ಣ ಹಾಳಾಗಿದ್ದು, ಸಾರ್ವಜನಿಕರಿಗೆ ಓಡಾಡಲು ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಬಂದಿದ್ದಲ್ಲಿ ರಸ್ತೆಗಳನ್ನು ಹಾಗೂ ಚರಂಡಿಗಳನ್ನು ಸರಿಪಡಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ಹಾಗೂ ಇದಕ್ಕೆ ಹಣ ಮಂಜೂರಾಗಿದೆಯೇ?

ಉತ್ತರ

ಅ) ಹೌದು.

ಆ) ಶಿವಮೊಗ್ಗ ನಗರಸಭೆಗೆ ಹೊಸದಾಗಿ 24 ಹಳ್ಳಿಗಳನ್ನು ಸೇರಿಸಲಾಗಿದ್ದು, ಈ ಗ್ರಾಮಗಳಲ್ಲಿ ಅನೇಕ ರಸ್ತೆಗಳು, ಚರಂಡಿಗಳು ಹಾಳಾಗಿರುತ್ತದೆ. ಇವುಗಳ ದುರಸ್ತಿಯನ್ನು ಆದ್ಯತೆಯ ಮೇರೆಗೆ ಹಂತ ಹಂತವಾಗಿ ತೆಗೆದುಕೊಳ್ಳಲಾಗುತ್ತಿದೆ. ಅಲ್ಲದೆ ನಗರದಲ್ಲಿಯು ಸಹ ಕೆಲವು ರಸ್ತೆ ಮತ್ತು ಚರಂಡಿಗಳು ಹಾಳಾಗಿರುತ್ತದೆ. ಈಗಿನ ಹೆಚ್ಚಿನ ವಾಹನ ಸಂಚಾರದಿಂದ ರಸ್ತೆ ಮತ್ತು ಚರಂಡಿಗಳ ತುರ್ತು ಅಭಿವೃದ್ಧಿ ಅವಶ್ಯಕತೆ ಇದ್ದು, ತುಂಬಾ ಹಾಳಾಗಿರುವ ರಸ್ತೆಗಳನ್ನು ಮರು ಡಾಂಬರೀಕರಣ ಮಾಡಿಸಲು ಕ್ರಮ ಕೈಗೊಳ್ಳಲಾಗಿದೆ. ಈಗಾಗಲೇ ಈ ಸಂಬಂಧ ರೂ.71.00 ಲಕ್ಷಗಳ ಅನುದಾನ ಬಿಡುಗಡೆ ಮಾಡಲಾಗಿರುತ್ತದೆ.

ಶಿವಮೊಗ್ಗ ನಗರಸಭೆ ವ್ಯಾಪ್ತಿಯ ಅನಧಿಕೃತ ಮನೆಗಳು.

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 94(310)

ಸದಸ್ಯರ ಹೆಸರು: ಶ್ರೀ ಚಂದ್ರಶೇಖರಪ್ಪ ಹೆಚ್.ಎಂ.(ಶಿವಮೊಗ್ಗ)